# ವಾರದಲ್ಲಿ ವರದಿಗೆ ಬಿಎಸ್‌ವೈ ಆದೇಶ

### 12 ಜಿಲ್ಲಾಡಳಿತಗಳ ಜತೆ ಸಿಎಂ ಸಭೆ

**ಬೆಂಗಳೂರು:** ಉತ್ತರ ಕರ್ನಾಟಕದಲ್ಲಿ ಪ್ರವಾಹದಿಂದ ಬೆಳೆಹಾನಿ ಸೇರಿದಂತೆ ಇತರೆ ಹಾನಿಗಳ ಕುರಿತು ವಾಸ್ತವ ಸ್ಥಿತಿಯ ಚಿತ್ರಣ ಬಗ್ಗೆ ವಾರದಲ್ಲಿ ವರದಿ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿ ಬಿ.ಎಸ್ .ಯಡಿಯೂರಪ್ಪ ನಿರ್ದೇಶನ ನೀಡಿದ್ದಾರೆ. ಪ್ರವಾಹಪೀಡಿತ 12 ಜಿಲ್ಲೆಗಳ ಅಧಿಕಾರಿಗಳ ಜೊತೆ ವಿಡಿಯೋ ಸಂವಾದ ನಡೆಸಿದ ಅವರು ನೆರೆ ಪರಿಸ್ಥಿತಿ ಬಗ್ಗೆ ಮಾಹಿತಿ ಪಡೆದುಕೊಂಡರು. ವಿವರ ▶ 6

# ವಾರದಲ್ಲಿ ನೆರೆ, ಬೆಳೆಹಾನಿ ವರದಿಗೆ ಸಿಎಂ ಆದೇಶ

## ಸಮೀಕ್ಷೆ ನಡೆಸಲು ಕಂದಾಯ, ಇತರೆ ಇಲಾಖೆ ಅಧಿಕಾರಿಗಳನ್ನು ಬಳಸಿಕೊಳ್ಳಿ | ಶೀಘ್ರ ಪ್ರವಾಹ ಪೀಡಿತ ಜಿಲ್ಲೆಗಳ ಪ್ರವಾಸಕ್ಕೆ ನಿರ್ಧಾರ
## ಉ.ಕ.ಪ್ರವಾಹದ ಬಗ್ಗೆ ಡೀಸಿ, ಜಿಪಂ ಸಿಇಓಗಳ ಜೊತೆ ಸಭೆ | ಹಣದ ಕೊರತೆ ಇಲ್ಲ, ಹೆಂಚಿನ ಮನೆ ಅರ್ಧ ಬಿದ್ದರೂ ಪರಿಹಾರ: ಬಿಎಸ್‌ವೈ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಉತ್ತರ ಕರ್ನಾಟಕ ಕೆಲ ಭಾಗಗಳಲ್ಲಿ ತೀವ್ರತರ ಮಳೆಯಿಂದಾಗಿ ಉಂಟಾಗಿರುವ ಪ್ರವಾಹದಿಂದ ಬೆಳೆಹಾನಿಸೇರಿದಂತೆಇತರೆಹಾನಿಗಳಕುರಿತುವಾಸ್ತವ ಸ್ಥಿತಿಯಚಿತ್ರಣದಬಗ್ಗೆವಾರದಲ್ಲಿವರದಿನೀಡುವಂತೆ ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿ ಬಿ.ಎಸ್ .ಯಡಿಯೂರಪ್ಪ ನಿರ್ದೇಶನ ನೀಡಿದ್ದಾರೆ.

ಮಳೆಯಿಂದಾಗಿ ಅರ್ಧ ಪ್ರಮಾಣದ ಹೆಂಚಿನ ಮನೆಗಳು ಬಿದ್ದುಹೋಗಿದ್ದರೆ ಅಂತಹವರಿಗೂ ಕೂಡ ನೆರವು ನೀಡಬೇಕು ಎಂದೂ ಅವರು ಸೂಚಿಸಿದ್ದಾರೆ.

ಅಲ್ಲದೆ, ಶೀಘ್ರದಲ್ಲೇ ಮುಖ್ಯಮಂತ್ರಿಗಳು ಹಾನಿ ಉಂಟಾಗಿರುವ ಜಿಲ್ಲೆಗಳ ಪ್ರವಾಸ ಕೈಗೊಂಡು ಪರಿಸ್ಥಿತಿಯ ಅವಲೋಕನಕ್ಕೆ ನಿರ್ಧರಿಸಿದ್ದಾರೆ. ಶುಕ್ರವಾರ ಪ್ರವಾಹದಿಂದ ಹಾನಿಗೊಳಗಾಗಿರುವ ಕಲಬುರಗಿ, ಯಾದಗಿರಿ, ಬೆಳಗಾವಿ ಸೇರಿದಂತೆ 12 ಜಿಲ್ಲೆಗಳ ಜಿಲ್ಲಾಧಿಕಾರಿಗಳ, ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಾಹಣಾಧಿಕಾರಿಗಳ, ಪೊಲೀಸ್ ವರಿಷ್ಠಾಧಿಕಾರಿಗಳ ಜತೆ ವಿಡಿಯೋ ಸಂವಾದ ನಡೆಸಿ ಪರಿಸ್ಥಿತಿ ಕುರಿತು ಮಾಹಿತಿ ಪಡೆದುಕೊಂಡರು.

ಈ ವೇಳೆ ಪ್ರವಾಹ ಪರಿಸ್ಥಿತಿ ಎದುರಿಸಲು ಹಣಕಾಸಿನ ಕೊರತೆ ಇಲ್ಲ, ಅಗತ್ಯ ನೆರವು ನೀಡುವುದಾಗಿ ಕೇಂದ್ರ ಸರ್ಕಾರವು ಭರವಸೆ ಕೊಟ್ಟಿದೆ. ರೈತರ ರಕ್ಷಣೆಗೆ ಬದ್ಧವಾಗಿದ್ದೇವೆ. ವಾಡಿಕೆಗಿಂತ ಹೆಚ್ಚು ಮಳೆಯಾಗಿದ್ದು, ನೆರೆ ಹಾನಿಯ ಬಗ್ಗೆ ಸಮೀಕ್ಷೆ ನಡೆಸಿ ವಾರದಲ್ಲಿ ವರದಿ ನೀಡಬೇಕೆಂದು ಸೂಚಿಸಿದ್ದಾರೆ.

ಸಮೀಕ್ಷೆ ನಡೆಸಲು ಕಂದಾಯ ಸೇರಿದಂತೆ ಇತರೆ ಇಲಾಖೆಯ ಅಧಿಕಾರಿಗಳನ್ನು ಬಳಸಿಕೊಳ್ಳಬೇಕು. ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದರೆ ಶಿಸ್ತುಕ್ರಮ ಜರುಗಿಸಲಾಗುವುದು. ಯಾವುದೇ ಕಾರಣಕ್ಕೂ ಸಂತ್ರಸ್ತರು ಆಹಾರ, ಆಶ್ರಯ ಇಲ್ಲದೇ ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಗಬಾರದು. ಅಗತ್ಯ ಇರುವ ಕಡೆ ಪರಿಹಾರ ಕೇಂದ್ರಗಳನ್ನು ಕೈಗೊಳ್ಳಬೇಕು. ಈಗಾಗಲೇ ಸರ್ಕಾರವು ವಸತಿ ಶಾಲೆಗಳಿಗೆ ರಜೆ ಘೋಷಿಸಲಾಗಿದೆ ಎಂದು ತಿಳಿಸಿದರು.

**51 ಸಾವಿರ ರೈತರ ಖಾತೆಗೆ ಹಣ ಜಮೆ:** ಇದೇ ವೇಳೆ ಪ್ರವಾಹದಿಂದ ಬೆಳೆ ಹಾನಿಯಾದ 51,800 ಸಂತ್ರಸ್ತ ರೈತರ ಬ್ಯಾಂಕ್ ಖಾತೆಗೆ 36.57 ಕೋಟಿ ರು. ಇನ್‌ಪುಟ್ ಸಬ್ಸಿಡಿಯನ್ನು ನೇರವಾಗಿ ಮುಖ್ಯಮಂತ್ರಿಗಳು ಆನ್‌ಲೈನ್ ಮೂಲಕ ಜಮೆ ಮಾಡಿದರು. ಸಭೆಯಲ್ಲಿ ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್, ಮುಖ್ಯಮಂತ್ರಿಗಳ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಡಾ.ಇ.ವಿ.ರಮಣರೆಡ್ಡಿ ಇದ್ದರು.



## ಜಿಲ್ಲಾಧಿಕಾರಿಗಳ ಬಳಿ ಸಾಕಷ್ಟು ಹಣ

**ಚು**ನಾವಣೆ ನೀತಿ ಸಂಹಿತೆ ಇರುವ ಕಾರಣ ವಿವರವಾಗಿ ಏನೂ ಹೇಳಲು ಸಾಧ್ಯವಾಗುವುದಿಲ್ಲ, ಜಿಲ್ಲಾಧಿಕಾರಿಗಳೊಂದಿಗೆ ಪ್ರವಾಹ ಪರಿಸ್ಥಿತಿ ಕುರಿತು ಚರ್ಚೆ ನಡೆಸಿದ್ದೇನೆ ಎಂದು ಸಿಎಂ ಯಡಿಯೂರಪ್ಪ ತಿಳಿಸಿದ್ದಾರೆ. ಪ್ರವಾಹಪೀಡಿತ ಜಿಲ್ಲೆಗಳ ಜಿಲ್ಲಾಧಿಕಾರಿ, ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಜಿಲ್ಲಾ ವರಿಷ್ಠಾಧಿಕಾರಿಗಳ ಜತೆ ವಿಡಿಯೋ ಸಂವಾದದ ಬಳಿಕ ಅವರು ಮಾತನಾಡಿದರು. ಪರಿಹಾರ ಕ್ರಮಗಳು ಹಾಗೂ ನೆರವಿನ ಬಗ್ಗೆ ಚರ್ಚಿಸಲಾಗಿದೆ. ಜಿಲ್ಲಾಧಿಕಾರಿಗಳ ಬಳಿ ಅಗತ್ಯ ಹಣ ಇದೆ ಎಂದರು.

## ಅಗತ್ಯ ನೆರವು: ಮೋದಿ ಅಭಯ



ನವದೆಹಲಿ: ಕಳೆದ ಕೆಲ ದಿನಗಳಿಂದ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ ಜಲ ಪ್ರಳಯದಂಥ ಸಂಕಷ್ಟಕ್ಕೆ ಸಿಲುಕಿರುವ ಕರ್ನಾಟಕಕ್ಕೆ ಅಗತ್ಯವಿರುವ ಎಲ್ಲ ನೆರವು ನೀಡುವುದಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಭರವಸೆ ನೀಡಿದ್ದಾರೆ.

ಈ ಸಂಬಂಧ ಶುಕ್ರವಾರ ಟ್ವೀಟ್ ಮಾಡಿದ ಪ್ರಧಾನಿ ನರೇಂದ್ರ ಮೋದಿ ಅವರು, 'ಭಾರಿ ಮಳೆಯಿಂದ ಕರ್ನಾಟಕದ ಕೆಲ ಕಡೆ ಉಂಟಾದ ಪ್ರವಾಹ ಪರಿಸ್ಥಿತಿ ಕುರಿತು ಸಿಎಂ ಬಿ.ಎಸ್.ಯಡಿಯೂರಪ್ಪ ಜೊತೆ ಸಮಾಲೋಚನೆ ನಡೆಸಿದ್ದೇನೆ. ಪ್ರವಾಹ ಸಂಕಷ್ಟಕ್ಕೆ ತುತ್ತಾದ ಕರ್ನಾಟಕದ ಜೊತೆ ನಿಲ್ಲುತ್ತೇವೆ. ಅಗತ್ಯ ನೆರವನ್ನು ಕೇಂದ್ರ ನೀಡಲಿದೆ' ಎಂದರು.

ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE: